ಪ್ರಧಾನ ಸಿವಿಲ್ ನ್ಯಾಯಾಧೀಶರು ಹಾಗೂ ಪ್ರ. ದ. ನ್ಯಾ ದಂಡಾಧಿಕಾರಿಗಳ ನ್ಯಾಯಾಲಯ, ಆನೇಕಲ್.

| | |
|---|---|
| ಒ.ಎಸ್. ನಂ :- | **134/2011** |
| ಡಿ.ಡಬ್ಲ್ಯೂ | **1** |
| **ದಿನಾಂಕ** :- | **02.03.2026** |

ಸಾಕ್ಷಿಗೆ ಪ್ರಮಾಣ ವಚನ ಬೋಧಿಸಲಾಯಿತು.

ಮುಂದುವರೆದ ಪಾಟೀ ಸವಾಲುಃ ವಾದಿ ಪರ ಶ್ರೀ.ಬಿ.ಎನ್.ಎಸ್. ವಕೀಲರಿಂದ

ನನ್ನ ತಂದೆ 1989 ರ ಇಸವಿಯಲ್ಲಿ ನಿಧನ ಹೊಂದಿರುತ್ತಾರೆ. ನಮ್ಮ ತಂದೆಯವರ ಸಹಿ ಯಾವ ರೀತಿ ಇದೆ ಎಂದು ನನಗೆ ಗೊತ್ತು. ನಮ್ಮ ತಂದೆಯವರು ಸಹಿ ಮಾಡಿರುವ ದಾಖಲೆಗಳು ನಮ್ಮ ಮನೆಯಲ್ಲಿ ಯಾವುದು ಇಲ್ಲ. ನಾನು 10 ನೇ ತರಗತಿವರೆಗೂ ವ್ಯಾಸಂಗ ಮಾಡಿರುತ್ತೇನೆ. ನನ್ನನ್ನು ನನ್ನ ತಂದೆ ಶಾಲೆಗೆ ಸೇರಿಸಿರುತ್ತಾರೆ. ಸದರಿ ಶಾಲೆಯಲ್ಲಿ ಕೊಟ್ಟಿರುವ ಅರ್ಜಿಯಲ್ಲಿ ನನ್ನ ತಂದೆಯ ಸಹಿ ಇರುತ್ತದೆ ಎಂದರೆ ನನಗೆ ಗೊತ್ತಿಲ್ಲ. ನಮಗೆ ಪಡಿತರ ಚೀಟಿ ಇದೆ. ಅದರಲ್ಲಿ ನನ್ನ ತಂದೆಯ ಸಹಿ ಇದೆ ಎಂದರೆ ನನಗೆ ಗೊತ್ತಿಲ್ಲ. ಸದರಿ ದಾಖಲೆಗಳಲ್ಲಿ ನನ್ನ ತಂದೆಯ ಸಹಿ ಇದ್ದರೂ ಸಹ ಹಾಗೂ ಅವುಗಳಲ್ಲಿ ಅವರ ಸಹಿ ಇದ್ದರೂ ಸಹ ದಾಖಲೆಗಳು ಯಾವುದು ಇಲ್ಲವೆಂದು ನಾನು ಸುಳ್ಳು ಹೇಳುತ್ತಿದ್ದೇನೆ ಎಂದರೆ ಸರಿಯಲ್ಲ. ನಿಪಿ-1 ರಲ್ಲಿರುವ ಸಹಿ ನನ್ನ ತಂದೆಯದ್ದು ಎಂದರೆ ಸರಿಯಲ್ಲ. ನನ್ನ ತಂದೆಯ ಸಹಿ ಇರುವ ದಾಖಲೆಯನ್ನು ನ್ಯಾಯಾಲಯಕ್ಕೆ ಕೊಟ್ಟರೆ ನನಗೆ ಈ ಪ್ರಕರಣದಲ್ಲಿ ಅನಾನುಕೂಲವಾಗಬಹುದೆಂದು ಆ ರೀತಿಯ ದಾಖಲೆ ಕೊಟ್ಟಿಲ್ಲ ಎಂದರೆ ಸರಿಯಲ್ಲ.

ನನ್ನ ತಂದೆ ಅವರ ಜೀತಿತಾವಧಿಯಲ್ಲಿ ಆಸ್ತಿಗಳನ್ನು ಖರೀದಿ ಮಾಡುವುದು ಮತ್ತು ಮಾರಾಟ ಮಾಡುವುದು ಮಾಡಿಲ್ಲ. ದಾವಾ ಆಸ್ತಿಯನ್ನು ನನ್ನ ತಂದೆ ಕ್ರಯ ಪತ್ರದ ಮೂಲಕ ಕೊಂಡುಕೊಂಡಿರುತ್ತಾರೆ ಎಂದರೆ ಸರಿಯಲ್ಲ. ದಾವಾ ಆಸ್ತಿ ನಮ್ಮ ಪಿತ್ರಾರ್ಜಿತ ಆಸ್ತಿ ಇರಬಹುದು, ನಿಖರವಾಗಿ ನನಗೆ ಗೊತ್ತಿಲ್ಲ. ದಾವಾ ಆಸ್ತಿ ನಮ್ಮ ಪಿತ್ರಾರ್ಜಿತ ಆಸ್ತಿ ಎನ್ನುವ ಬಗ್ಗೆ ನಾನು ಯಾವುದೇ ದಾಖಲೆ ನೋಡಿಲ್ಲ. ದಾವಾ ಆಸ್ತಿ ನನ್ನ ತಂದೆ ಖರೀದಿ ಮಾಡಿರುವ ಆಸ್ತಿ ಆಗಿದ್ದು, ಅದರ ಅಸಲಿ ಕ್ರಯಪತ್ರ ಮನೆಯಲ್ಲಿ ಇದೆ ಎಂದರೆ ಸರಿಯಲ್ಲ. ನನ್ನ ತಂದೆ ಮೃತಪಟ್ಟ ಮೇಲೆ ಅವರ ಮಾಡಿದ ವ್ಯವಹಾರದ ದಾಖಲೆಗಳು ನನ್ನ ಸುಪರ್ದಿಗೆ ಬಂದಿವೆ ಎಂದರೆ ಸರಿಯಲ್ಲ. ನನ್ನ ತಂದೆ ಸಹಿ ಮಾಡಿರುವ ದಾಖಲೆಗಳು ನನ್ನ ಬಳಿ ಇದ್ದರು ಸಹ, ಅವುಗಳನ್ನು ನ್ಯಾಯಾಲಯಕ್ಕೆ ಕೊಡದೆ ಮುಚ್ಚಿಡುವ ಪ್ರಯತ್ನ ಮಾಡುತ್ತಿದ್ದೇನೆ ಎಂದರೆ ಸರಿಯಲ್ಲ.

(ತೆರೆದ ನ್ಯಾಯಾಲಯದಲ್ಲಿ ಉಕ್ತಲೇಖನದ ಮುಖಾಂತರ ಬೆರಳಚ್ಚು ಮಾಡಿಸಿ ಸಾಕ್ಷಿದಾರನಿಗೆ ಓದಿ ಹೇಳಲಾಯಿತು)

ಓ.ಹೇ.ಕೇ. ಸರಿ ಇದೆ.

ಪ್ರಧಾನ ಸಿವಿಲ್ ನ್ಯಾಯಾಧೀಶರು
ಹಾಗೂ ಪ್ರ.ದ.ನ್ಯಾದಂಡಾಧಿಕಾರಿಗಳು,
ಆನೇಕಲ್.